ಕರ್ನಾಟಕ ಸರ್ಕಾರ

ಸಂಖ್ಯೆ: ಗ್ರಾಅಪ 352 ಜಿಪಸ 2017

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿ ಕಟ್ಟಡ,
ಬೆಂಗಳೂರು, ದಿನಾಂಕ:15-09-2017.

## ಸುತ್ತೋಲೆ

**ವಿಷಯ:** ದಿನಾಂಕ:01-10-2017 ರಿಂದ 15-10-2017ರವರೆಗೆ ರಾಜ್ಯದ ಎಲ್ಲಾ ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿ ಗ್ರಾಮ ಸಮೃದ್ಧಿ ಹಾಗೂ ಸ್ವಚ್ಛತಾ ಪಾಕ್ಷಿಕ ಆಚರಿಸುವ ಕುರಿತು.

**ಉಲ್ಲೇಖ:**
1. ಕಾರ್ಯದರ್ಶಿ, ಗ್ರಾಮೀಣಾಭಿವೃದ್ಧಿ ಮಂತ್ರಾಲಯ, ನವದೆಹಲಿ ಇವರ ಅರೆ ಸರ್ಕಾರಿ ಪತ್ರ ಸಂಖ್ಯೆ: RD/GSESP/States:2017, ದಿನಾಂಕ: 18-07-2017.
2. ರಾಷ್ಟ್ರೀಯ ಗ್ರಾಮ ಸ್ವರಾಜ್ ಅಭಿಯಾನ ಯೋಜನೆಯ 4ನೇ ಕೇಂದ್ರ ಕಾರ್ಯಕಾರಿ ಸಮಿತಿ ಸಭೆಯ ನಡವಳಿಗಳ ದಿನಾಂಕ:14-08-2017.
3. ಸರ್ಕಾರದ ಪ್ರಧಾನ ಕಾರ್ಯದರ್ಶಿ(ಪಂ.ರಾಜ್)ರವರ ಹೆಸರಿನಲ್ಲಿ ಹೊರಡಿಸಲಾದ ಅರೆ ಸರ್ಕಾರಿ ಪತ್ರ ಸಂಖ್ಯೆ: ಗ್ರಾಅಪ 78 ಉಖಾಯೋ 2017, ದಿನಾಂಕ:18-08-2017.
4. ಸರ್ಕಾರದ ಸುತ್ತೋಲೆ ಸಂಖ್ಯೆ:ಗ್ರಾಅಪ 991 ಗ್ರಾಪಂಅ 2017, ದಿನಾಂಕ:29-08-2017.
5. ಜಂಟಿ ಕಾರ್ಯದರ್ಶಿ, ಪಂಚಾಯತ್ ರಾಜ್ ಮಂತ್ರಾಲಯ, ನವದೆಹಲಿ ಇವರ ಅರೆ ಸರ್ಕಾರಿ ಪತ್ರ ಸಂಖ್ಯೆ:M-11011/12/2017-FD, ದಿನಾಂಕ:08-09-2017.

*****

ಭಾರತ ಸರ್ಕಾರದ ಗ್ರಾಮೀಣಾಭಿವೃದ್ಧಿ ಸಚಿವಾಲಯವು ಎಲ್ಲಾ ರಾಜ್ಯಗಳ ಸಂಯೋಗದೊಂದಿಗೆ ಗ್ರಾಮ ಸಮೃದ್ಧಿ ಹಾಗೂ ಸ್ವಚ್ಛತಾ ಪಾಕ್ಷಿಕವನ್ನು ದೇಶದಾದ್ಯಂತ ದಿನಾಂಕ:01-10-2017 ರಿಂದ 15-10-2017ರವರೆಗೆ ಎಲ್ಲಾ ಗ್ರಾಮ ಪಂಚಾಯತಿಗಳ ವ್ಯಾಪ್ತಿಯಲ್ಲಿ ನಡೆಸಲು ಉದ್ದೇಶಿಸಿರುತ್ತಾರೆ. ಈ ಆಚರಣೆಯ ಸಂದರ್ಭದಲ್ಲಿ ಗ್ರಾಮಗಳಲ್ಲಿನ ಪರಿಸರದ ಸ್ವಚ್ಛತೆ, ಗ್ರಾಮ ಸಭೆಗಳಲ್ಲಿ ಸಾರ್ವಜನಿಕರ ಭಾಗವಹಿಸುವಿಕೆ ಹಾಗೂ ಕುಟುಂಬಗಳ ಜೀವನೋಪಾಯಕ್ಕಾಗಿ ಯೋಜನೆಗಳನ್ನು ರೂಪಿಸುವ ಕುರಿತು ಅರಿವು ಮೂಡಿಸುವ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಬೇಕಾಗಿದೆ.

ಸ್ವಚ್ಛತಾ ಪಾಕ್ಷಿಕ ಆಚರಣೆಯ ಸಂಬಂಧವಾಗಿ ಗ್ರಾಮದ ಎಲ್ಲಾ ಜನರು ಸ್ವಚ್ಛತೆಯ ಪ್ರಚಾರದಲ್ಲಿ ಪಾಲ್ಗೊಳ್ಳುವಂತೆ ಪ್ರೇರೆಪಿಸುವುದು. ನೀರಿನ ಸ್ವಚ್ಛತೆಯನ್ನು ಕಾಪಾಡುವುದು, ಶೌಚಾಲಯಗಳ ಬಳಕೆ ಹಾಗೂ ದ್ರವ ಮತ್ತು ಘನ ತ್ಯಾಜ್ಯ ನಿರ್ವಹಣೆಯ ಮೂಲಕ ಸ್ವಚ್ಛತೆಯನ್ನು ಪ್ರಚುರಪಡಿಸುವುದು.

ರಾಜ್ಯದಲ್ಲಿನ ಎಲ್ಲಾ ಗ್ರಾಮ ಪಂಚಾಯತಿಗಳಲ್ಲಿ ಗ್ರಾಮ ಸಭೆಗಳನ್ನು ನಡೆಸುವ, ಸ್ವಚ್ಛತಾ ಆಂದೋಲನಗಳನ್ನು ಹಮ್ಮಿಕೊಳ್ಳುವ, ವಿವಿಧ ಸಾಮಾಜಿಕ ಭದ್ರತಾ ಸೌಲಭ್ಯದ ಯೋಜನೆಗಳು, ಕಾರ್ಯಕ್ರಮಗಳ ಕುರಿತಾದ ಸಮಗ್ರ ಸಾರ್ವಜನಿಕ ಮಾಹಿತಿ ವ್ಯವಸ್ಥೆ ಆರೋಗ್ಯ ಸೌಲಭ್ಯಗಳಂತಹ ಕಾರ್ಯಚಟುವಟಿಕೆಗಳನ್ನು ಮಹಿಳಾ ಸ್ವಯಂ ಸೇವಾ ಸಂಘಗಳು, ಗ್ರಾಮ ಪಂಚಾಯತಿಗಳ ಚುನಾಯಿತ ಪ್ರತಿನಿಧಿಗಳು, ಆಶಾ ಕಾರ್ಯಕರ್ತೆಯರು, ಅಂಗನವಾಡಿ ಸಹಾಯಕರು ಮತ್ತು ಕಾಲೇಜು ವಿದ್ಯಾರ್ಥಿಗಳನ್ನು ಒಳಗೂಡಿಸಿಕೊಂಡು ಗ್ರಾಮ ಸಮೃದ್ಧಿ ಹಾಗೂ ಸ್ವಚ್ಛತಾ ಪಾಕ್ಷಿಕದ ಆಚರಣೆಯನ್ನು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸುವುದು.

**ಗ್ರಾಮ ಸಮೃದ್ಧಿ ಹಾಗೂ ಸ್ವಚ್ಛತಾ ಪಾಕ್ಷಿಕ ಆಚರಣೆಯ ಸಂದರ್ಭದಲ್ಲಿ ಗ್ರಾಮ ಪಂಚಾಯತಿಗಳು ಹಮ್ಮಿಕೊಳ್ಳಬೇಕಾದ ಕಾರ್ಯಕ್ರಮಗಳು:**

1. 2017ರ ಅಕ್ಟೋಬರ್ 02 ರಂದು 'ನಮ್ಮ ಗ್ರಾಮ ನಮ್ಮ ಯೋಜನೆ'ಯಡಿಯಲ್ಲಿ ಗ್ರಾಮಗಳ ಮುನ್ನೋಟದ ಗುರಿಯೊಂದಿಗೆ ಗ್ರಾಮ ಸಭೆಗಳನ್ನು ನಡೆಸುವುದು. ಸದರಿ ಮುನ್ನೋಟವು ತ್ಯಾಜ್ಯಮುಕ್ತ ಪಂಚಾಯತಿ, ಮಹಿಳೆಯರ ಸಬಲೀಕರಣ ವಿಶೇಷವಾಗಿ ಹೆಣ್ಣು ಮಗುವಿನ ಸಶಕ್ತೀಕರಣಗೊಳಿಸುವ ಗುರಿಯನ್ನು ಹೊಂದುವ ಕ್ಷೇತ್ರಗಳ ಕಡೆ ಗಮನ ಹರಿಸುವುದು. ಈ ಮುನ್ನೋಟವು ಗ್ರಾಮ ಪಂಚಾಯತಿಗಳ ಫಲಾನುಭವಿಗಳ ಪಟ್ಟಿಯಾಗಿರಬಾರದು. ಗ್ರಾಮ ಸಭೆಯು ಸದರಿ ದಿನವನ್ನು ಒಂದು ರಾಷ್ಟ್ರೀಯ ಗ್ರಾಮ ಪಂಚಾಯತಿ ದಿನವನ್ನಾಗಿ ಆಚರಿಸಲು ತೀರ್ಮಾನಿಸಬಹುದು.

2. **ಸಮಗ್ರ ಹಾಗೂ ಸಂಪೂರ್ಣ ಸಾರ್ವಜನಿಕ ಮಾಹಿತಿ ವ್ಯವಸ್ಥೆ:** ಸರ್ಕಾರದ ವಿವಿಧ ಇಲಾಖೆಗಳ ಕಾರ್ಯಕ್ರಮಗಳಡಿಯಲ್ಲಿ ಫಲಾನುಭವಿಗಳ ಪಟ್ಟಿಯನ್ನು ಗ್ರಾಮ ಪಂಚಾಯತಿ ಕಟ್ಟಡಗಳಲ್ಲಿ ಗೋಡೆ ಬರಹ, ಸಾರ್ವಜನಿಕ ದಾಖಲೆಗಳು, ಬಿತ್ತಿ ಚಿತ್ರಗಳು, ಮೊಬೈಲ್ ಆಧಾರಿತ ಆ್ಯಪ್‌ಗಳ ಮೂಲಕ ಪ್ರಚುರಪಡಿಸುವುದು. ವಿವಿಧ ಕಾರ್ಯಕ್ರಮಗಳಲ್ಲಿಯ ಸಂಪನ್ಮೂಲಗಳನ್ನು ಒಗ್ಗೂಡಿಸಿ ತಯಾರಿಸಿದ 'ನಮ್ಮ ಗ್ರಾಮ ನಮ್ಮ ಯೋಜನೆ'ಯನ್ನು ಸಮಗ್ರ ಹಾಗೂ ಸಂಪೂರ್ಣ ಸಾರ್ವಜನಿಕ ಮಾಹಿತಿ ವ್ಯವಸ್ಥೆಯಡಿ ಜಾರಿಗೆ ತರುವುದು.

3. **ಗ್ರಾಮ ಸಮೃದ್ಧಿಯ ಯೋಜನೆಯನ್ನು ತಯಾರಿಸುವುದು:** ಸ್ವಚ್ಛತಾ ಪಾಕ್ಷಿಕ ಆಚರಣೆಯ ಸಂದರ್ಭದಲ್ಲಿ ಸಂವಿಧಾನದ 11ನೇ ಪರಿಚ್ಛೇದದ ಮೂಲಕ ಪಂಚಾಯತ್ ರಾಜ್ ಸಂಸ್ಥೆಗಳಿಗೆ ಹಂಚಿಕೆಯಾದ 29 ವಿಷಯಗಳಿಗೆ ಅನ್ವಯವಾಗುವಂತೆ ವಿವಿಧ ಕಾರ್ಯಕ್ರಮಗಳನ್ನು ಒಗ್ಗೂಡಿಸಿ, 2018-19ನೇ ಸಾಲಿನ 'ನಮ್ಮ ಗ್ರಾಮ ನಮ್ಮ ಯೋಜನೆ'ಯನ್ನು ಸಿದ್ಧಪಡಿಸುವುದು.

    i. ಮುಂಬರುವ ಆರ್ಥಿಕ ವರ್ಷಕ್ಕೆ ಸಂಬಂಧಿಸಿದಂತೆ ಮಹಾತ್ಮ ಗಾಂಧಿ ರಾಷ್ಟ್ರೀಯ ಉದ್ಯೋಗ ಖಾತರಿ ಯೋಜನೆಯ ಕಾಮಗಾರಿಗಳ ಗುಚ್ಛವನ್ನು ಸದರಿ ಪಾಕ್ಷಿಕ ಆಚರಣೆಯ ಸಂದರ್ಭದಲ್ಲಿ ವಿಶೇಷ ಗ್ರಾಮ ಸಭೆಯನ್ನು ಕರೆಯುವುದರ ಮೂಲಕ ತಯಾರಿಸುವುದು.

    ii. ಪ್ರಧಾನ ಮಂತ್ರಿ ಗ್ರಾಮೀಣ ಆವಾಸ ಯೋಜನೆಯಡಿಯಲ್ಲಿ ಮುಕ್ತಾಯಗೊಂಡಿರುವ ಎಲ್ಲಾ ಮನೆಗಳ 'ಗೃಹ ಪ್ರವೇಶ'ವನ್ನು ಕೈಗೊಳ್ಳುವುದು ಹಾಗೂ ಚಾಲ್ತಿಯಲ್ಲಿರುವ ಎಲ್ಲಾ ಕಾಮಗಾರಿಗಳ ಪರಿವೀಕ್ಷಣೆ ಮಾಡುವುದು.

**ಸರ್ಕಾರದ ಕಾರ್ಯಕ್ರಮಗಳ ಬಗ್ಗೆ ಅರಿವು ಮೂಡಿಸುವುದು:**

14ನೇ ಹಣಕಾಸು ಆಯೋಗದ ಅನುದಾನ, ಮಹಾತ್ಮ ಗಾಂಧಿ ರಾಷ್ಟ್ರೀಯ ಉದ್ಯೋಗ ಖಾತರಿ ಯೋಜನೆ, ಪ್ರಧಾನ ಮಂತ್ರಿ ಗ್ರಾಮೀಣ ಆವಾಸ ಯೋಜನೆ ಹಾಗೂ ಇತರೆ ಸರ್ಕಾರಿ ಕಾರ್ಯಕ್ರಮಗಳಾದ ಶಿಕ್ಷಣ, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇತ್ಯಾದಿ ಯೋಜನೆಗಳ ಅನುದಾನವನ್ನು ಒಗ್ಗೂಡಿಸಿ, 'ನಮ್ಮ ಗ್ರಾಮ ನಮ್ಮ ಯೋಜನೆ'ಯಡಿಯಲ್ಲಿ ಕೈಗೊಂಡ ಕಾಮಗಾರಿಗಳ ಪಟ್ಟಿಯನ್ನು ಮಾಹಿತಿ ಶಿಕ್ಷಣ ಹಾಗೂ ಸಂವಹನದ ಮೂಲಕ ಪ್ರಚುರ ಪಡಿಸುವುದು.

**ನೈರ್ಮಲೀಕರಣ- ಸ್ವಚ್ಛ ಹಾಗೂ ಹಸಿರು ಗ್ರಾಮ:**

ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆಯ ಸ್ವಚ್ಛ ಭಾರತ ಮಿಷನ್ ಶಾಖೆಯು ನಿಗಧಿಪಡಿಸಿರುವಂತೆ ರಾಜ್ಯದ ಎಲ್ಲಾ ಗ್ರಾಮ ಪಂಚಾಯತಿಗಳ ಪ್ರತಿ ಜನವಸತಿಗಳಿಗೆ 14ನೇ ಹಣಕಾಸು ಆಯೋಗ ಅನುದಾನದಡಿ ಲಭ್ಯವಿರುವ ಅನುದಾನದಿಂದ ನಿಯಮಾನುಸಾರ ಕಸದ ತೊಟ್ಟಿಗಳನ್ನು ಖರೀದಿಸುವುದು ಮತ್ತು ಜನವಸತಿ ಪ್ರದೇಶಗಳಲ್ಲಿ ಅಳವಡಿಸುವುದು. ಈಗಾಗಲೇ ಬೇರೆ ಯೋಜನೆಗಳಡಿ ಕಸದ ತೊಟ್ಟಿಗಳನ್ನು ಖರೀದಿಸಿ ಅಳವಡಿಸಿದ್ದಲ್ಲಿ, ಪುನಃ ಖರೀದಿಸುವ ಅಗತ್ಯವಿರುವುದಿಲ್ಲ.

**ಪ್ರಶಸ್ತಿಗಳು:**

14ನೇ ಹಣಕಾಸು ಆಯೋಗ ಅನುದಾನ ಮತ್ತು ಮಹಾತ್ಮ ಗಾಂಧಿ ರಾಷ್ಟ್ರೀಯ ಉದ್ಯೋಗ ಖಾತರಿ ಯೋಜನೆಯಡಿಯಲ್ಲಿ ನಿರ್ಮಾಣವಾದ ಆಸ್ತಿಗಳನ್ನೊಳಗೊಂಡಂತೆ 'ನಮ್ಮ ಗ್ರಾಮ ನಮ್ಮ ಯೋಜನೆ'ಯ ಯೋಜನಾ ತಯಾರಿಕೆ ಹಾಗೂ ಕಾರ್ಯರೂಪಕ್ಕೆ ತರುವಲ್ಲಿ ಅತ್ಯುತ್ತಮವಾಗಿರುವ 100 ಗ್ರಾಮ ಪಂಚಾಯತಿಗಳಿಗೆ ಪ್ರಶಸ್ತಿಗಳನ್ನು ಮುಂಬರುವ ದಿನಗಳಲ್ಲಿ ನೀಡಲಾಗುವುದು.

ಈ ಬಗ್ಗೆ ಕೈಗೊಂಡ ಕ್ರಮದ ಕುರಿತು ಜಿಲ್ಲಾವಾರು ದೃಢೀಕೃತ ವರದಿಗಳನ್ನು ಹಾರ್ಡ್ ಹಾಗೂ ಪಂಚತಂತ್ರ ತಂತ್ರಾಂಶದಲ್ಲಿ ಅಳವಡಿಸುವುದು.

H. [signature]

(ಎಂ.ಸುಮಿತ್ರ)

ಸರ್ಕಾರದ ಅಧೀನ ಕಾರ್ಯದರ್ಶಿ(ಜಿ.ಪಂ)

ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

[signature] 15/9/17

**ಇವರಿಗೆ:**

1. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಕೌಶಲ್ಯಾಭಿವೃದ್ಧಿ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
2. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ವಿಕಾಸಸೌಧ, ಬೆಂಗಳೂರು.

3. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
4. ಆಯುಕ್ತರು, ಗ್ರಾಮೀಣಾಭಿವೃದ್ಧಿ ಆಯುಕ್ತಾಲಯ, ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.
5. ಆಯುಕ್ತರು, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ.
6. ಮಿಷನ್ ನಿರ್ದೇಶಕರು, ಎನ್.ಆರ್.ಎಲ್.ಎಂ., ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.
7. ಎಲ್ಲಾ ಜಿಲ್ಲಾ ಪಂಚಾಯತಿಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು- ಅಗತ್ಯ ಕ್ರಮಕ್ಕಾಗಿ.
8. ನಿರ್ದೇಶಕರು(ಪಂ.ರಾಜ್-1), ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.
9. ನಿರ್ದೇಶಕರು, ಸುವರ್ಣ ಗ್ರಾಮೋದಯ ಯೋಜನೆ, ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.
10. ನಿರ್ದೇಶಕರು, ಗ್ರಾಮೀಣ ಮೂಲಭೂತ ಸೌಕರ್ಯ-2, ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.
11. ಮುಖ್ಯಸ್ಥರು, ಸ್ವಚ್ಛ ಭಾರತ ಮಿಷನ್.
12. ನಿರ್ದೇಶಕರು, ಅಬ್ದುಲ್ ನಜೀರ್ ಸಾಬ್ ರಾಜ್ಯ ಗ್ರಾಮೀಣಾಭಿವೃದ್ಧಿ ಸಂಸ್ಥೆ, ಲಲಿತಮಹಲ್ ರಸ್ತೆ, ಮೈಸೂರು.
13. ಎಲ್ಲಾ ತಾಲ್ಲೂಕು ಪಂಚಾಯತಿಗಳ ಕಾರ್ಯನಿರ್ವಾಹಕ ಅಧಿಕಾರಿಗಳು, (ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳ ಮೂಲಕ)- ಕಾರ್ಯಕ್ರಮಗಳನ್ನು ಯಶಸ್ವಿಗೊಳಿಸಲು ಅಗತ್ಯ ಕ್ರಮ ವಹಿಸುವುದು.
14. ಎಲ್ಲಾ ಗ್ರಾಮ ಪಂಚಾಯತಿ ಅಧ್ಯಕ್ಷರು/ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು (ಕಾರ್ಯನಿರ್ವಾಹಕ ಅಧಿಕಾರಿಗಳ ಮೂಲಕ)- ಮೇಲಿನಂತೆ ಕಾರ್ಯಕ್ರಮಗಳನ್ನು ಆಯೋಜಿಸಿ ಯಶಸ್ವಿಗೊಳಿಸಲು ಅಗತ್ಯ ಕ್ರಮ ವಹಿಸುವುದು.
15. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.

**ಪ್ರತಿ:**

1. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು.
2. ಸರ್ಕಾರದ ಪ್ರಧಾನ ಕಾರ್ಯದರ್ಶಿ (ಪಂ.ರಾಜ್), ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆರವರ ಆಪ್ತ ಕಾರ್ಯದರ್ಶಿರವರ ಮಾಹಿತಿಗಾಗಿ.
3. ನಿರ್ದೇಶಕರು (ಪಂ.ರಾಜ್-2) ಹಾಗೂ ಪದನಿಮಿತ್ತ ಸರ್ಕಾರದ ಜಂಟಿ ಕಾರ್ಯದರ್ಶಿ, ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ ರವರ ಆಪ್ತ ಸಹಾಯಕರು.
4. ಆಂತರಿಕ ಆರ್ಥಿಕ ಸಲಹೆಗಾರರು, ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ ರವರ ಆಪ್ತ ಸಹಾಯಕರು.
5. ಮುಖ್ಯ ಸಂಪಾದಕರು, ಕರ್ನಾಟಕ ವಿಕಾಸ, ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.
6. ವೆಬ್ ಸೈಟ್, ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.